ಚಾಮರಾಜನಗರದಲ್ಲಿ ಕಂದಾಯ ಉಪ ವಿಭಾಗದ ಕಛೇರಿ

507- ಶ್ರೀ ಮಹದೇವ ಪ್ರಸಾದ್ ಹೆಚ್.ಎಸ್. (ಗುಂಡ್ಲುಪೇಟೆ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಚಾಮರಾಜನಗರದಲ್ಲಿ ಕಂದಾಯ ಉಪ ವಿಭಾಗಾಧಿಕಾರಿಗಳ ಕಛೇರಿ ಪ್ರಾರಂಭಿಸಲು ಸರ್ಕಾರ ಉದ್ದೇಶಿಸಿದೆಯೇ?*

ಆ) *ಪ್ರಾರಂಭಿಸುವಂತೆ ಚಾಮರಾಜನಗರ ಮತ್ತು ಗುಂಡ್ಲುಪೇಟೆ ತಾಲ್ಲೂಕಿನಿಂದ ಒತ್ತಾಯ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು) :

ಅ) ಇಲ್ಲ

ಆ) ಇಲ್ಲ

ಬೀರೂರು ಬಸ್ ನಿಲ್ದಾಣಕ್ಕೆ ಛಾವಣಿ ನಿರ್ಮಾಣ

508 - ಶ್ರೀ ಮಲ್ಲಿಕಾರ್ಜುನ ಕೆ.ಬಿ. (ಬೀರೂರು) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕಡೂರು ತಾಲ್ಲೂಕು ಬೀರೂರು ನಗರದ ಬಸ್ ನಿಲ್ದಾಣದಲ್ಲಿ ಛಾವಣಿ ಇಲ್ಲದೆ ಪ್ರಯಾಣಿಕರು ಬಿಸಿಲು ಮತ್ತು ಮಳೆಯಿಂದ ತೊಂದರೆ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು?*

ಶ್ರೀ ಸಿ.ಆರ್. ಸಗೀರ್ ಅಹ್ಮದ್ (ಸಾರಿಗೆ ಸಚಿವರು) :

ಅ) ಬಂದಿದೆ.

ಆ) ಬಸ್‌ನಿಲ್ದಾಣಕ್ಕೆ ಮುಚ್ಚಳ ಹೊದಿಕೆ ಅಳವಡಿಸುವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ.

ಚಿಕ್ಕಮಗಳೂರು ಹಾಗೂ ಬೀರೂರು ಕ್ಷೇತ್ರಗಳಲ್ಲಿ ಅಂಗನವಾಡಿ ಕೇಂದ್ರಗಳು.

509 - ಶ್ರೀ. ಮಲ್ಲಿಕಾರ್ಜುನ ಕೆ.ಜಿ. (ಬೀರೂರು) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಚಿಕ್ಕಮಗಳೂರು ಜಿಲ್ಲೆ ಬೀರೂರು ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು?*

ಆ) *ಸ್ವಂತ ಕಟ್ಟಡ ಹೊಂದಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು?*